ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕಾಮಗಾರಿಯಲ್ಲಿ ಅವ್ಯವಹಾರ ನಡೆಯುತ್ತಿರುವ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

724 (661) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಲ್ಲಿ ಬಂದಿರುವ ಕಾಮಗಾರಿಗಳಲ್ಲಿ ಕೇವಲ ಇಬ್ಬರಿಗೆ ಮಾತ್ರ 20 ಕಾಮಗಾರಿ ವಹಿಸಿರುವುದು ತಿಳಿದು ಬಂದಿದ್ದು ಹಾಗೂ ಸದರಿ ಕಾಮಗಾರಿ ಕೆಲಸ ಕೂಡಾ ಸರಿಯಾಗಿ ನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಸಂಬಂಧಿಸಿದ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕೆಂದು ಆದೇಶ ಮಾಡಿರುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮದ ವಿವರ ನೀಡುವುದು ;

(ಆ) 2015-16ನೇ ಸಾಲಿನಿಂದ ಇಲ್ಲಿಯವರೆಗೆ ಕಾರವಾರ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ವಿವರ, ಸದರಿ ಕಾಮಗಾರಿ ಪಡೆದುಕೊಂಡಿರುವ ಗುತ್ತಿಗೆದಾರರ ಹೆಸರು, ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನ ಹಾಗೂ ಕಾಮಗಾರಿ ನಡೆದಿರುವ ಸ್ಥಳದ ವಿವರ ನೀಡುವುದು ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಇಲಾಖೆಯಲ್ಲಿ ಸಂಬಂಧಿಸಿದ ಮೇಲಾಧಿಕಾರಿಗಳ ಶಾಮೀಲಾತಿಯಿಂದ ಬಹಳಷ್ಟು ಕಾಮಗಾರಿಗಳಲ್ಲಿ ಅವ್ಯವಹಾರ ಆಗಿದ್ದು, ಈ ಕುರಿತು ಉನ್ನತ ಅಧಿಕಾರಿಗಳ ತನಿಖಾ ತಂಡದಿಂದ ತನಿಖೆ ಮಾಡಿಸಿ ಸಂಬಂಧಿಸಿದವರ ಮೇಲೆ ಶಿಸ್ತಿನ ಕ್ರಮಕೈಗೊಳ್ಳಲಾಗುವುದೇ ?